**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಡಾ.ತೇಜಸ್ವಿನಿಗೌಡ ಇವರು ನಿಯಮ-330 ರಡಿ ಮಂಡಿಸಿರುವ ಸೂಚನಗೆ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಉತ್ತರ**

*****

**ವಿಷಯ:** ಕರ್ನಾಟಕ ರಾಜ್ಯದಲ್ಲಿ ಕನ್ನಡ ಚಿತ್ರರಂಗದ ದಿಗ್ದರ್ಶಕರಾಗಿ ಕಾದಂಬರಿ ಆಧಾರಿತ 'ಮಹಿಳಾ ಪ್ರಧಾನ' ಚಿತ್ರಗಳನ್ನು ನೀಡುವ ಮಹಿಳಾ ಘನತೆ ಹಾಗೂ ಸಬಲೀಕರಣಕ್ಕೆ ವಿಶೇಷ ಕೊಡುಗೆ ನೀಡಿದ ದಿವಂಗತ ಶ್ರೀ ಪುಟ್ಟಣ್ಣ ಕಣಗಾಲ್‌ರವರು ಜನಿಸಿದ ಮನೆಯು ಮೈಸೂರು ರಾಜ್ಯದ ಪಿರಿಯಾಪಟ್ಟಣ ತಾಲೂಕಿನ ಕಣಗಾಲ್ ಗ್ರಾಮದಲ್ಲಿದೆ. ಇಂತಹ ಖ್ಯಾತನಾಮರ ಮನೆಯು ಪೂರ್ಣ ಶಿಥಿಲಾವಸ್ಥೆಯಲ್ಲಿದ್ದು ಜೀರ್ಣೋದ್ಧಾರ ಆಗಬೇಕಿದೆ. ಹಾಗೆಯೇ ಹಿಂದುಳಿದ ವರ್ಗದವರ ಕಲ್ಯಾಣ ಪುರುಷ ಮಾಜಿ ಮುಖ್ಯಮಂತ್ರಿ ದಿವಂಗತ ಶ್ರೀ ದೇವರಾಜ್ ಅರಸುವರ ಹುಟ್ಟೂರು ಹುಣಸೂರು ತಾಲ್ಲೂಕಿನ ಬೆಟ್ಟದತುಂಗ ಕೂಡಾ ಅಭಿವೃದ್ಧಿಯ ನಿರೀಕ್ಷೆಯಲ್ಲಿದ್ದು ಈ ಬಗ್ಗೆ ಸದನದಲ್ಲಿ ಚರ್ಚಿಸಲು ಅವಕಾಶ ಕೋರುತ್ತೇನೆ.

**ಉತ್ತರ:** ಕನ್ನಡ ಚಿತ್ರರಂಗದ ಖ್ಯಾತ ನಿರ್ದೇಶಕರಾಗಿದ್ದ ದಿವಂಗತ ಶ್ರೀ ಪುಟ್ಟಣ್ಣ ಕಣಗಾಲ್‌ರವರ ಹುಟ್ಟೂರಾದ ಮೈಸೂರು ಜಿಲ್ಲೆ, ಪಿರಿಯಾಪಟ್ಟಣ ತಾಲ್ಲೂಕಿನ ಕಣಗಾಲ್ ಗ್ರಾಮದ ಮನೆಯನ್ನು ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಪುರುಷ ಮಾಜಿ ಮುಖ್ಯಮಂತ್ರಿಗಳಾದ ದಿವಂಗತ ದೇವರಾಜ್ ಅರಸು ಅವರ ಹುಟ್ಟೂರಾದ ಹುಣಸೂರು ತಾಲ್ಲೂಕಿನ ಬೆಟ್ಟದತುಂಗ ಅಭಿವೃದ್ಧಿಪಡಿಸುವ ಯೋಜನೆಯ ಕುರಿತು ಜಿಲ್ಲಾಡಳಿತದಿಂದ ಪ್ರಸ್ತಾವನೆ ಸ್ವೀಕೃತವಾಗಿರುವುದಿಲ್ಲ. ಪ್ರಸ್ತಾವನೆ ಸ್ವೀಕೃತವಾದಲ್ಲಿ, ಈ ಬಗ್ಗೆ ಪರಿಶೀಲಿಸಲಾಗುವುದು.

ಸಂಖ್ಯೆ: ಕಸಂವಾ 50 ಕವಿಸ 2023

**(ಶಿವರಾಜ.ಎಸ್.ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು